**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಧಾರವಾಡ -580 008.**

**ಅಧಿಸೂಚನೆ ಸಂಖ್ಯೆ ADM./01/2023**

**ದಿನಾಂಕ: 31.01.2023**

**ವಿಷಯ:** ಧಾರವಾಡ ಜಿಲ್ಲಾ ನ್ಯಾಯಾಲಯ ಘಟಕದಲ್ಲಿ ಖಾಲಿ ಇರುವ **ಬೆರಳಚ್ಚು-ನಕಲುಗಾರರ** ಹಾಗೂ ಜವಾನ ಹುದ್ದೆಗಳ ನೇಮಕಾತಿ ಕುರಿತು.

**ಉಲ್ಲೇಖ:**

1. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ದಿನಾಂಕ: 13.02.2017 ಮತ್ತು 19.09.2018ರ ಪತ್ರಗಳ ಸಂಖ್ಯೆ: LCA-II/128/2012.
2. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ದಿನಾಂಕ: 21.12.2019 ಮತ್ತು 27.01.2012ರ ಪತ್ರಗಳ ಸಂಖ್ಯೆ: LCA-II/128/2012.
3. ಈ ಕಛೇರಿ ಅಧಿಸೂಚನೆ ಸಂಖ್ಯೆ 03/2017, ದಿನಾಂಕ 05.08.2017.
4. ಈ ಕಛೇರಿ ಅಧಿಸೂಚನೆ ಸಂಖ್ಯೆ 05/2017, ದಿನಾಂಕ 05.08.2017.
5. ಈ ಕಛೇರಿ ಅಧಿಸೂಚನೆ ಸಂಖ್ಯೆ 01/2019, ದಿನಾಂಕ 08.01.2019.
6. ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಎಲ್ಎಡಬ್ಲ್ಯೂ-166, ಎಲ್ಎಸಿ-2015, ದಿನಾಂಕ 06.03.2021 (ಕರ್ನಾಟಕ ಅಧೀನ ನ್ಯಾಯಾಲಯಗಳ) (ಲಿಪಿಕ ಮತ್ತು ಇತರೇ ಹುದ್ದೆಗಳು) (ನೇರ ನೇಮಕಾತಿ) (ತಿದ್ದುಪಡಿ) ನಿಯಮಗಳು-2021.
7. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ01ಸೆಹಿಮ 2022, ಬೆಂಗಳೂರು ದಿನಾಂಕ 28.12.2022.

***

ಉಲ್ಲೇಖ 1ರ ಗೌರವಾನ್ವಿತ ಉಚ್ಚ ನ್ಯಾಯಾಲಯದ ನಿರ್ದೇಶನದಂತೆ, ಧಾರವಾಡ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಘಟಕದಲ್ಲಿ ಖಾಲಿ ಇರುವ ಬೆರಳಚ್ಚು-ನಕಲುಗಾರರ ಹಾಗೂ ಜವಾನ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಉಲ್ಲೇಖ 3 ರಿಂದ 5ರ ಕಛೇರಿ ಅಧಿಸೂಚನೆಗಳಂತೆ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಭರ್ತಿಯಾಗದೆ ಉಳಿದ 1 ಬೆರಳಚ್ಚು-ನಕಲುಗಾರರ ಹಾಗೂ 2 ಜವಾನ ಹುದ್ದೆಗಳನ್ನು ಹಾಗೂ ಉಲ್ಲೇಖ 2ರ ಗೌರವಾನ್ವಿತ ಉಚ್ಚ ನ್ಯಾಯಾಲಯದ ನಿರ್ದೇಶನದಂತೆ, ಖಾಲಿ ಇರುವ 01 ಬೆರಳಚ್ಚು-ನಕಲುಗಾರ ಹಾಗೂ 29 ಜವಾನ ಹುದ್ದೆಗಳನ್ನೊಳಗೊಂಡು ಒಟ್ಟು ಘಟಕದ 02 ಬೆರಳಚ್ಚು-ನಕಲುಗಾರರ ಹಾಗೂ 31 ಜವಾನ ಹುದ್ದೆಗಳ ಭರ್ತಿಗಾಗಿ ಈ ಅಧಿಸೂಚನೆ ಹೊರಡಿಸಲಾಗಿದೆ.

ಅರ್ಜಿಗಳನ್ನು ಧಾರವಾಡ ನ್ಯಾಯಾಲಯ ವೆಬ್‌ಸೈಟ್ https://districts.ecourts.gov.in/dharwad-onlinerecruitment ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್ ಲೈನ್ ನಲ್ಲಿ ಸಲ್ಲಿಸತಕ್ಕದ್ದು.

**ಆನ್ ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 01.03.2023 ರಾತ್ರಿ 11.59 ಘಂಟೆ.**

**ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮೂಲಕ ಶುಲ್ಕ ಪಾವತಿಸಲು ಕೊನೆಯ ದಿನಾಂಕ: 03.03.2023**

**ಭಾಗ - 1**

**ಬೆರಳಚ್ಚು ನಕಲುಗಾರ (Typist-Copyist) ಹುದ್ದೆಗಳ ಸಂಖ್ಯೆ : 02**

ವೇತನ ಶ್ರೇಣಿ 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರ ಭತ್ಯೆಗಳೊಂದಿಗೆ

**ಹುದ್ದೆಗಳ ವರ್ಗೀಕರಣ:**

| ಮೀಸಲಾತಿ | ಮಹಿಳೆ | ಗ್ರಾಮೀಣ | ಒಟ್ಟು |
|---|---|---|---|
| ಸಾಮಾನ್ಯ | -- | 01 | 01 |
| ಪ್ರವರ್ಗ- 3-ಎ | 01 | -- | 01* |
| ಒಟ್ಟು | 01 | 01 | 02 |

* ಹಿಂಬಾಕಿ ಹುದ್ದೆ

**ಶೈಕ್ಷಣಿಕ ವಿದ್ಯಾರ್ಹತೆ:**

1) ಕರ್ನಾಟಕ ಪದವಿ ಪೂರ್ವ ಶಿಕ್ಷಣ ಇಲಾಖೆಯು ನಡೆಸುವ ದ್ವಿತೀಯ ವರ್ಷದ ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

2) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕಿರಿಯ ದರ್ಜೆಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರಬೇಕು.

ಅಥವಾ

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟೇರಿಯಲ್ ಪ್ರ್ಯಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಕಿರಿಯ ದರ್ಜೆಯ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

**ಆಯ್ಕೆ ವಿಧಾನ:**

ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳ ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ

ಆಯ್ಕೆ ಮಾಡಲಾಗುವುದು. ಅರ್ಹತಾ ಪರೀಕ್ಷೆಯಲ್ಲಿ ಬೆರಳಚ್ಚು ಯಂತ್ರ/ಕಂಪ್ಯೂಟರನಲ್ಲಿ ಬೆರಳಚ್ಚು ಮಾಡಿಸಲಾಗುವುದು.

## ಭಾಗ- 2

### ಜವಾನ (Peon) - ಹುದ್ದೆಗಳ ಸಂಖ್ಯೆ 31

ವೇತನ ಶ್ರೇಣಿ :- 17000-400-18600-450-20400-500-22400-550-24600-600-27000-650-28950 ಮತ್ತು ಇತರ ಭತ್ಯೆಗಳು.

**ಹುದ್ದೆಗಳ ವರ್ಗೀಕರಣ:**

| ಮೀಸಲಾತಿ | ಇತರೆ | ಗ್ರಾಮೀಣ | ಮಹಿಳೆ | ಕನ್ನಡ ಮಾಧ್ಯಮ | ವಿಶೇಷ ಚೇತನರು | ಮಾಜಿ ಸೈನಿಕ | ಒಟ್ಟು |
|---|---|---|---|---|---|---|---|
| ಸಾಮಾನ್ಯ | 03 | 04+01* | 04 | 01 | 01* | 01 | 15 |
| ಪ್ರವರ್ಗ-1 | 01 | -- | -- | -- | -- | -- | 01 |
| ಪ್ರವರ್ಗ- 2ಎ | 01 | 01 | 01 | -- | -- | 01 | 04 |
| ಪ್ರವರ್ಗ- 2ಬಿ | 01 | -- | -- | -- | -- | -- | 01 |
| ಪ್ರವರ್ಗ- 3-ಎ | 02 | -- | -- | -- | -- | -- | 02 |
| ಪ್ರವರ್ಗ- 3-ಬಿ | -- | -- | 01 | -- | -- | -- | 01 |
| ಪರಿಶಿಷ್ಟ ಜಾತಿ | 01 | 02 | 01 | -- | 01 | -- | 05 |
| ಪರಿಶಿಷ್ಟ ಪಂಗಡ | -- | 01 | 01 | -- | -- | -- | 02 |
| ಒಟ್ಟು | 09 | 09 | 08 | 01 | 02 | 02 | 31 |

* ಹಿಂಬಾಕಿ ಹುದ್ದೆಗಳು

ಸೂಚನೆ : ಸಾಮಾನ್ಯ ಮೀಸಲಾತಿಯ ವಿಶೇಷ ಚೇತನರ ಹುದ್ದೆಯು ಕಿವುಡುತನ ವ ಶ್ರವಣದೋಷವುಳ್ಳವರಿಗೆ ಅಭ್ಯರ್ಥಿಗಳಿಗಾಗಿ ಹಾಗೂ ಪರಿಶಿಷ್ಟ ಜಾತಿ ಮೀಸಲಾತಿಯ ವಿಶೇಷ ಚೇತನರ ಹುದ್ದೆಯು ಅಂಧ ವ ದೃಷ್ಟಿ ಮಾಂದ್ಯ ಅಭ್ಯರ್ಥಿಗಳಿಗಾಗಿ ಮೀಸಲಿರಿಸಿದ ಹುದ್ದೆಗಳಾಗಿವೆ.

**ಶೈಕ್ಷಣಿಕ ವಿದ್ಯಾರ್ಹತೆ:**

**(1) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.**

**(2) ಕನ್ನಡ ಭಾಷೆ ಓದಲು ಬರೆಯಲು ತಿಳಿದಿರಬೇಕು.**

**(3) ಲಘುವಾಹನ ಚಾಲನಾ ಲೈಸನ್ಸ್ ಐಚ್ಛಿಕ** (Optional)

**ಆಯ್ಕೆ ವಿಧಾನ:**

ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಿ 1:10 ರ ಅನುಪಾತದಲ್ಲಿ

ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. 10ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ **(Grade),** ಅದನ್ನು ಅಂಕಗಳಾಗಿ ಪರಿವರ್ತಿಸಿ, ಗರಿಷ್ಟ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರು ನಮೂದು ಇರಬೇಕು.

**ಸೂಚನೆ:** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ ಮಹಿಳಾ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಮಾಜಿ-ಸೈನಿಕ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ವರ್ಗಗಳ ಇತರ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ವರ್ಗಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಭಾಗ-3:**

**ವಯೋಮಿತಿ**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

(1) ಕನಿಷ್ಠ 18 ವರ್ಷ ವಯಸ್ಸನ್ನು ಪೂರ್ಣಸಿರಬೇಕು ಕಕ್ಕದ್ದು.

(2) ಗರಿಷ್ಠ ವಯೋಮಿತಿ.

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪ.ಜಾತಿ, ಪ.ಪಂಗಡ, ಪ್ರವರ್ಗ-1 | 40 ವರ್ಷ |

ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

**ವಯೋಮಿತಿ ಸಡಿಲಿಕೆ:**

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಗೆ ಹೆಚ್ಚಿಸಲಾಗುವುದು.

(1) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ

ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ. ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

(2) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

(3) ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

(4) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(5) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(6) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ವಿದ್ಯುದೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

**ಪರಿವೀಕ್ಷಣಾ ಅವಧಿ:**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು), 1977ರ ಪ್ರಕಾರ 02 (ಎರಡು) ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ.

**ಪಿಂಚಣಿ ಸೌಲಭ್ಯ:**

ಸರ್ಕಾರದ ದಿ: 31.03.2006ರ ಆದೇಶ ಸಂಖ್ಯೆ: ಎಫ್.ಡಿ.ಎಸ್.ಪಿ.ಎಲ್. 04 ಪಿ ಇ ಟಿ 2005ಯಂತೆ ಹೊಸ ಪಿಂಚಣಿ ಯೋಜನೆಯು ಅನ್ವಯಿಸುತ್ತದೆ.

## ಭಾಗ-4

**ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕಾದ ದಾಖಲಾತಿಗಳು:**

1. ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ಚಲನ್ ಪ್ರತಿ.

2. ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿಗಳು.

3. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿಗೆ ಸಂಬಂಧಿಸಿದ ಮೀಸಲಾತಿ ಕೋರಿದ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ತಹಶೀಲ್ದಾರರಿಂದ ಪಡೆದ ಜಾತಿ ಮತ್ತು ಆದಾಯದ ಪ್ರಮಾಣ ಪತ್ರ.

4.ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ/96/ಸೇನಿಸಿ/2005 ದಿನಾಂಕ 10-08-2005 ರ ಪ್ರಕಾರ ನಿಗದಿತ ನಮೂನೆ-2ರಲ್ಲಿ ಅಧೀಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರ.

5. ಗ್ರಾಮೀಣ ಮೀಸಲಾತಿ ಕೋರುವ ಪ.ಜಾತಿ, ಪ.ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

6. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.

7. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ದಿನಾಂಕ 19-11-2005 ರ ಸರ್ಕಾರದ ಅಧೀಕೃತ ಜ್ಞಾಪನಾ ಸಂಖ್ಯೆ:ಆಸುಇ/115/ಸೇನಿಸಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.

8. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣಪತ್ರ.

9. ಅಭ್ಯರ್ಥಿಗಳು ಕೊನೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾಸಂಸ್ಥೆಯ ಮುಖ್ಯೋಪಾಧ್ಯಾಯರು/ ಪ್ರಾಂಶುಪಾಲರಿಂದ ಪಡೆದ ನಡತೆ ಪ್ರಮಾಣಪತ್ರ (Conduct certificate).

10. ಅಭ್ಯರ್ಥಿಗಳು ತಮ್ಮ ಸಂಬಂಧಿಯಲ್ಲದ ಇಬ್ಬರು ಗಣ್ಯ ವ್ಯಕ್ತಿಗಳಿಂದ (ಹಿಂದೆ ಕಲಿತ ಶಾಲಾ ಅಥವಾ ಕಾಲೇಜು ಮುಖ್ಯಸ್ಥರನ್ನು ಹೊರತುಪಡಿಸಿ) ಅರ್ಜಿ ಸಲ್ಲಿಸುವ ದಿನಾಂಕದ ಆರು ತಿಂಗಳ

ಒಳಗೆ ಪಡೆದ ಎರಡು ನಡತೆಯ ಪ್ರಮಾಣಪತ್ರಗಳು (Character Certificate). (ಗಣ್ಯ ವ್ಯಕ್ತಿಗಳ ರುಜುವಿನಡಿಯಲ್ಲಿ ಹೆಸರು ಮತ್ತು ಮೊಹರು ಕಡ್ಡಾಯವಾಗಿ ಇರತಕ್ಕದ್ದು)

ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ಪ್ರತಿಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಪರಿಗಣಿಸಲಾಗುವುದಿಲ್ಲ.

## ಭಾಗ 5

ಅಭ್ಯರ್ಥಿಗಳು **ON-LINE** ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೆ ಇರುವ ಅಥವಾ ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ತಮಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.
3. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು ಅಳತೆಯಲ್ಲಿ 5cm ಉದ್ದ x 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು JPG ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿಬಣ್ಣದ್ದಾಗಿಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5cm ಉದ್ದ x 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 26 kb ಅಳತೆಯದ್ದಾಗಿರಬೇಕು ಹಾಗೂ JPG ನಮೂನೆಯಲ್ಲಿರಬೇಕು) ಅಪ್ ಲೋಡ್ ಮಾಡಬೇಕು.

4. ತದನಂತರ ಅಭ್ಯರ್ಥಿಯು **ON-LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆ/ಸಂದರ್ಶನ ಸಮಯದಲ್ಲಿ ಹಾಜರು ಪಡಿಸತಕ್ಕದ್ದು.

5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

6. ನ್ಯಾಯಾಲಯದ ಅಧಿಕೃತ ವೆಬ್ ಸೈಟ್ https://districts.ecourts.gov.in/dharwad-onlinerecruitment ನಲ್ಲಿ ದಿನಾಂಕ: **01.02.2023** ರಿಂದ ದಿನಾಂಕ: **01.03.2023** ರವರೆಗೂ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು/ ಸಲ್ಲಿಸಲು ದಿನಾಂಕ: **01.03.2023** ರಾತ್ರಿ **11.59** ರವರೆಗೆ ಅವಕಾಶವಿರುತ್ತದೆ.

ಮತ್ತು

ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು **03.03.2023** ಕಡೆಯ ದಿನಾಂಕವಾಗಿದ್ದು ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

7. ಅರ್ಹ ಅಭ್ಯರ್ಥಿಗಳಿಗೆ **SMS/** ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗೂ ಸಂದರ್ಶನಕ್ಕೆ ಕರೆಯಲಾಗುವುದು.

**ಅರ್ಜಿ ಸಲ್ಲಿಸುವ ವಿಧಾನ:**

**ಪಾವತಿಸಬೇಕಾದ ನಿಗದಿತ ಶುಲ್ಕ ಮತ್ತು ವಿಧಾನ:**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿಗೆ ಸೇರಿದ ಅಭ್ಯರ್ಥಿಗಳಿಗೆ | ರೂ.200/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ | ರೂ.100/- |
| ಅಂಗವಿಕಲ ಅಭ್ಯರ್ಥಿಗಳಿಗೆ | ರೂ.100/- |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/dharwad-onlinerecruitment ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ ಆಫ್ ಇಂಡಿಯಾದ State Bank Collect ಮೂಲಕ on-line payment through net banking/credit card/debit card/challan download ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್ ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸಿದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್ ಸೈಟನಿಂದ ಡೌನ್ ಲೋಡ್ ಮಾಡಿಕೊಂಡು ಅದರ print-out ಅನ್ನು ಪಡೆದುಕೊಂಡು ಎಸ್.ಬಿ.ಐ.ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ, ಪೋಸ್ಟಲ್ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಮತ್ತು ನ್ಯಾಯಾಲಯದ ಖಾತೆಗೆ ಶುಲ್ಕ ಜಮಾ ಆಗದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅಭ್ಯರ್ಥಿಗಳಿಗೆ ಸೂಚನೆ:**

1. ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

2. ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಗೂ ತದನಂತರ ದಾಖಲೆಗಳ ಪರಿಶೀಲನೆಗೆ ಹಾಜರಾಗತಕ್ಕದ್ದು.

3. ಅಭ್ಯರ್ಥಿಗೆ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಯಾವುದೇ ಪತ್ರ ವ್ಯವಹಾರಗಳನ್ನು ನಡೆಸಲಾಗುವುದಿಲ್ಲ.

31/1/2023

(ಕೆ.ಜಿ ಶಾಂತಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ನೇಮಕಾತಿ ಪ್ರಾಧಿಕಾರ, ಧಾರವಾಡ

DISTRICT & SESSIONS JUDGE
DHARWAD

ಪ್ರತಿಯನ್ನು ಮಾನ್ಯ ವಿಲೇಖನಾಧಿಕಾರಿಗಳು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಮುಖಪತ್ರದೊಂದಿಗೆ) ಮಾಹಿತಿಗಾಗಿ ಸಲ್ಲಿಸಲಾಗಿದೆ.

<u>ಪ್ರತಿಯನ್ನು:</u>

1) ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರುಗಳಿಗೆ, ತಮ್ಮ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸುವ ಕುರಿತು ವಿನಂತಿಯೊಂದಿಗೆ.
2) ನಿರ್ದೇಶಕರು, ರಾಜ್ಯ ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು-ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
3) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ ಮೈಸೂರು ರಸ್ತೆ, ಬೆಂಗಳೂರು-ಇವರಿಗೆ.
4) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಧಾರವಾಡ ಜಿಲ್ಲೆ, ಧಾರವಾಡ-ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
5) ಧಾರವಾಡ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಿಗೆ, ವ್ಯಾಪಕ ಪ್ರಚಾರಕ್ಕಾಗಿ.
6) ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಧಾರವಾಡ ಸೂಚನಾ ಫಲಕಕ್ಕೆ.
7) ತಂತ್ರಾಂಶ ತಂತ್ರಜ್ಞರು, ಜಿಲ್ಲಾ ನ್ಯಾಯಾಲಯ, ಧಾರವಾಡ-ನ್ಯಾಯೊಲಯದ website ನಲ್ಲಿ ಪ್ರಕಟಿಸಲು.
8) ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ.
9) ಕಛೇರಿ ಪ್ರತಿ (02)